ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ ನೃಪತುಂಗ ರಸ್ತೆ,ಬೆಂಗಳೂರು-560001.**

ಸಂಖ್ಯೆ:ಸಿ7(2)ಪ್ರಾಶಿಅ;ಖಾ.ಶಾಲಾ .ಮ.ದಾ&ಶುಲ್ಕ.3/2021-22 ದಿನಾಂಕ:13/10/2021

ಸುತ್ತೋಲೆ

ವಿಷಯ: ರಾಜ್ಯದ ಎಲ್ಲಾ ಶಾಲೆಗಳಲ್ಲಿನ 2021-22ನೇ ಶೈಕ್ಷಣಿಕ ಸಾಲಿನ ಮಕ್ಕಳ ದಾಖಲಾತಿ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:1. ಕರ್ನಾಟಕ ಶಿಕ್ಷಣ ಕಾಯ್ದೆ-1983 ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯಕ್ರಮ ನಿಗಧಿ ಇತ್ಯಾದಿ) ನಿಯಮಗಳು-1995

2.ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ-2009, ನಿಯಮಗಳು-2021.

3,ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.31.ಪಿಜಿಸಿ.2009, ದಿನಾಂಕ:24-7-2019

4.ಈ ಕಛೇರಿ ಸುತ್ತೋಲೆ ಸಂಖ್ಯೆ:ಸಿ4(6)ಶೈ ಮತ್ತು ರಜೆ.ಅ.ನಿಗಧಿ.35/2020-21 ದಿನಾಂಕ:20-4-2021 ಮತ್ತು 31-5-2021

5.ಈ ಕಛೇರಿ ಸುತ್ತೋಲೆ ಸಂಖ್ಯೆ:ಎಡಿಎಂ(1)ಶೈ.ವ.ನಿ.01/2021-22, ದಿ:4-6-2021

6.ಈ ಕಛೇರಿ ಸುತ್ತೋಲೆ ಸಂಖ್ಯೆ:4-6-2021 ಮತ್ತು 31-8-2021

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2021-22ನೇ ಶೈಕ್ಷಣಿಕ ಸಾಲಿನ ಶಾಲಾ ಮಕ್ಕಳ ದಾಖಲಾತಿಯನ್ನು ಜೂನ್-15 ರಿಂದ ಪ್ರಾರಂಭಿಸಿ ಅಕ್ಟೋಬರ್-30 ರೊಳಗೆ ಮುಕ್ತಾಯಗೊಳಿಸುವಂತೆ ಸೂಚಿಸಿ ಈ ಕಛೇರಿ ಉಲ್ಲೇಖಿತ(6)ರ ಸುತ್ತೋಲೆಯಲ್ಲಿ ಸೂಚಿಸಲಾಗಿತ್ತು.

ಆದರೆ, ಕೋವಿಡ್-19ರ ಹಿನ್ನೆಲೆಯಲ್ಲಿ 06 ರಿಂದ 10ನೇ ತರಗತಿ ಶಾಲೆಗಳು ಭೌತಿಕವಾಗಿ ಪ್ರಾರಂಭವಾಗಿದ್ದು, 1 ರಿಂದ 5ನೇ ತರಗತಿಯನ್ನು ಭೌತಿಕವಾಗಿ ಪ್ರಾರಂಭಿಸುವ ಕುರಿತಂತೆ ಅನುಷ್ಠಾನ ಪ್ರಗತಿಯಲ್ಲಿರುವುದರಿಂದ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ದಿನಾಂಕವನ್ನು **30-11-2021**ರವರೆಗೆ ವಿಸ್ತರಿಸಲಾಗಿದೆ. ಉಳಿದಂತೆ ದಾಖಲಾತಿಗೆ ಸಂಬಂಧಿಸಿದಂತೆ ಉಲ್ಲೇಖಿತ(6)ರಲ್ಲಿ ಸೂಚಿಸಿರುವ ಅಂಶಗಳು ಯಥಾವತ್ತಾಗಿ ಜಾರಿಯಲ್ಲಿರುತ್ತದೆ.

ಮುಂದುವರೆದು, ಕೋವಿಡ್-19ರ ಸಂಬಂಧ ಕಾಲಕಾಲಕ್ಕೆ ಸರ್ಕಾರ/ಇಲಾಖೆಯಿಂದ ಹೊರಡಿಸುವ ಮಾರ್ಗಸೂಚಿಗಳಿಗೆ ಅನ್ವಯವಾಗುವ ಬದಲಾವಣೆಗಳಿಗೆ ಈ ಆದೇಶ ಒಳಪಟ್ಟಿರುತ್ತದೆ.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ.

ಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಮತ್ತು ಅಭಿವೃದ್ಧಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ ಮತ್ತು ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ವ್ಯಾಪಕ ಪ್ರಚಾರ ನೀಡುವುದರ ಮುಖಾಂತರ ತಮ್ಮ ವ್ಯಾಪ್ತಿಯಲ್ಲಿನ ಶಾಲೆಗಳ ಮುಖ್ಯಸ್ಥರ ಗಮನಕ್ಕೆ ತರುವುದು.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಶಾಲೆಗಳ ಮುಖ್ಯೋಪಾಧ್ಯಾಯರು/ಆಡಳಿತ ಮಂಡಳಿಗಳಿಗೆ ಸೂಕ್ತ ಕ್ರಮಕ್ಕಾಗಿ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ), ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ ಮತ್ತು ಧಾರವಾಡ.
3. ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
4. ಕಛೇರಿ ಪ್ರತಿ.